**ದಿಃ 26-06-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿಯ ಪರ ವಕೀಲರಾದ ಶ್ರೀ ಬಿ.ಎನ್.ಪಿ. ರವರಿಂದಃ-**

ನಾನು ಈ ದಾವೆಯಲ್ಲಿ 1 ನೇ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದ ಸಂಗತಿಗಳು ನಿಜವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದು ಇರುತ್ತದೆ.

ನಾನು ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಕರ ಆಕರಣೆಯಾದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ -1 ಎಂದು ಗುರುತಿಸಲಾಯಿತು. ನಾನು ತೆರಿಗೆ ಪಾವತಿ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ -2 ಎಂದು ಗುರುತಿಸಲಾಯಿತು. ನಾನು ಗ್ರಾಮ ಪಂಚಾಯಿತಿಗೆ ನೀಡಿದ ಅರ್ಜಿಯ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ನಾನು ಪೊಲೀಸರು ನೀಡಿದ ಸ್ವೀಕೃತಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ -4 ಎಂದು ಗುರುತಿಸಲಾಯಿತು. ನಾನು ಮೂರು ಛಾಯಚಿತ್ರಗಳನ್ನು ಹಾಗೂ ಒಂದು ಸಿಡಿಯನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ- 5 ರಿಂದ 8 ಎಂದು ಗುರುತಿಸಲಾಯಿತು. ನಾನು ದಾವಾ ಆಸ್ತಿಗೆ ಸಂಬಂಧಪಟ್ಟ ಕಚ್ಚಾ ನಕಾಶೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ -9 ಎಂದು ಗುರುತಿಸಲಾಯಿತು. ನಾನು ಪ್ರಥಮ ವರ್ತಮಾನ ವರದಿ ಮತ್ತು ದೂರನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-10 ಮತ್ತು 11 ಎಂದು ಗುರುತಿಸಲಾಯಿತು. ನಾನು 4 ಛಾಯಚಿತ್ರಗಳು ಹಾಗೂ ಒಂದು ಸಿಡಿಯನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-12 ರಿಂದ 16 ಎಂದು ಗುರುತಿಸಲಾಯಿತು. ನಾನು 3 ಛಾಯಚಿತ್ರಗಳು ಹಾಗೂ ಒಂದು ಸಿಡಿಯನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ -17 ರಿಂದ 20 ಎಂದು

ಗುರುತಿಸಲಾಯಿತು. ನಾನು ಒಂದು ಪತ್ರಿಕಾ ಪ್ರಕಟಣೆಯನ್ನು ಹಾಜರುಪಡಿಸಿದ್ದು ಅದನುಖ ನಿಪಿ-21 ಎಂದು ಗುರುತಿಸಲಾಯಿತು.

**ವಾದಿ ಪರ ವಕೀಲರು ಸಾಕ್ಷಿಯ ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶವನ್ನು ಕೋರಿದ್ದು ನೀಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ ಸರಿಯಿದೆ.**

**ಸಹಿ/-**

**3 ನೇ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು,**
**ಬೆಳಗಾವಿ.**